ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 18/11/20

# ಸಭಾಪತಿ ವಿರುದ್ಧ ಅವಿಶ್ವಾಸ ಮಂಡನೆಗೆ ಸಿದ್ಧತೆ

## ವಿಧಾನಪರಿಷತ್‌ನಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ? | 31 ಸ್ಥಾನದೊಂದಿಗೆ ಕಮಲ ಪಡೆ ಅತಿ ದೊಡ್ಡ ಪಕ್ಷ

**ಬೆಂಗಳೂರು:** ಕಾಂಗ್ರೆಸ್-ಜೆಡಿಎಸ್ ಸಂಬಂಧ ತೀರಾ ಹಳಸುತ್ತಿದ್ದಂತೆ, ಜೆಡಿಎಸ್ ಬಿಜೆಪಿಗೆ ಇನ್ನಷ್ಟು ಹತ್ತಿರವಾಗುವ ಲಕ್ಷಣ ಕಾಣಿಸುತ್ತಿದೆ. ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನದಿಂದ ವಿಧಾನಪರಿಷತ್ ವರೆಗೆ ಹಂತಹಂತವಾಗಿ ಮೈತ್ರಿಗೆ ಭೂಮಿಕೆ ಸಿದ್ಧವಾಗುತ್ತಿದೆ.



ಪ್ರಸ್ತುತ ವಿಧಾನಪರಿಷತ್‌ನಲ್ಲಿ ಕಾಂಗ್ರೆಸ್‌ನಿಂದ ಸದಸ್ಯರಾಗಿರುವ ಪ್ರತಾಪ್‌ಚಂದ್ರ ಶೆಟ್ಟಿ ಸಭಾಪತಿಯಾಗಿದ್ದಾರೆ. ಇತ್ತೀಚೆಗೆ ಪರಿಷತ್‌ನ ನಾಲ್ಕು ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಿತ್ತಲ್ಲದೆ, ಪರಿಷತ್‌ನಲ್ಲಿ ಅತಿ ದೊಡ್ಡ ಪಕ್ಷವಾಗಿ ಕಾಣಿಸಿಕೊಂಡಿದೆ. ಬಿಜೆಪಿ 31 ಸ್ಥಾನ ಹೊಂದಿದ್ದರೆ, ಓರ್ವ ಪಕ್ಷೇತರ ಸದಸ್ಯ ಬಿಜೆಪಿ ಪರವಾಗಿದ್ದಾರೆ. ಕಾಂಗ್ರೆಸ್ 29 ಮತ್ತು ಜೆಡಿಎಸ್ 14 ಸದಸ್ಯರನ್ನು ಹೊಂದಿವೆ. ಬದಲಾದ ರಾಜಕೀಯ ಬೆಳವಣಿಗೆಯಲ್ಲಿ ಜೆಡಿಎಸ್ ಬಿಜೆಪಿಗೆ ಹತ್ತಿರವಾಗುತ್ತಿರುವುದರಿಂದ ಸಭಾಪತಿ ಸ್ಥಾನವನ್ನು ಕಾಂಗ್ರೆಸ್‌ನಿಂದ ಕಸಿದುಕೊಳ್ಳುವ ಸಾಧ್ಯತೆಯೂ ದಟ್ಟವಾಗಿದೆ. ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ಮಾಡಲು ಬಿಜೆಪಿ ಚರ್ಚೆ ನಡೆಸಿದ್ದು, ಶೀಘ್ರವೇ ಮಂಡನಾ ಪ್ರಕ್ರಿಯೆ ನಡೆಯಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ಒಂದು ವೇಳೆ ಮತದಾನ ನಡೆದರೆ, ನಿರ್ಣಯದ ವಿರುದ್ಧ 36 ಮತ ಬೀಳುವುದು ಅನುಮಾನ. ಈ ಕಾರಣಕ್ಕೆ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ಕೊಡುವ ಪ್ರಸಂಗವೇ ಹೆಚ್ಚಿರುತ್ತದೆ. ಡಿಸೆಂಬರ್‌ನಲ್ಲಿ ನಡೆಯಬಹುದಾದ ಅಧಿವೇಶನ ಸಂದರ್ಭದಲ್ಲಿ ಈ ಎಲ್ಲ ಪ್ರಕ್ರಿಯೆ ನಡೆಯಲಿದೆ.

### ಯಾರಾಗಬಹುದು ಸಭಾಪತಿ?

ವಿಧಾನಪರಿಷತ್ ಸದಸ್ಯರಾಗಿ, ಮಂತ್ರಿಯಾಗಿರುವ ಕೋಟಾ ಶ್ರೀನಿವಾಸ ಪೂಜಾರಿ ಹೆಸರು ಸಭಾಪತಿ ಸ್ಥಾನಕ್ಕೆ ಕೇಳಿಬರುತ್ತಿದೆ. ಹಾಲಿ ಡಿಸಿಎಂ ಲಕ್ಷ್ಮಣ ಸವದಿ ವಿಧಾನಪರಿಷತ್‌ನಿಂದಲೇ ಪ್ರತಿನಿಧಿಸುತ್ತಿದ್ದಾರೆ. ಹೀಗಾಗಿ ಪರಿಷತ್‌ನಿಂದ ಒಬ್ಬರಿಗಾದರೂ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕೆಂಬ ನಿಯಮ ಪಾಲನೆಯಾದಂತಾಗುತ್ತಿದೆ. ಕೋಟಾ ಅವರನ್ನು ಸಚಿವ ಸ್ಥಾನದಲ್ಲಿ ಕುಳ್ಳಿರಿಸಿದರೆ ಸಂಪುಟದಲ್ಲಿ ಒಂದು ಸ್ಥಾನ ಹೆಚ್ಚಾಗಿ ತುಂಬಿಕೊಳ್ಳಲು ಸಾಧ್ಯವಾಗುತ್ತದೆ. ದಕ್ಷಿಣ ಕನ್ನಡಕ್ಕೂ ಪ್ರಾತಿನಿಧ್ಯ ಕೊಟ್ಟಂತಾಗುತ್ತದೆ ಎಂಬ ಲೆಕ್ಕಾಚಾರಗಳೆಲ್ಲ ನಡೆದಿದೆ.

### ಡಿಸೆಂಬರ್‌ನಲ್ಲಿ ಅಧಿವೇಶನ

**ಬೆಂಗಳೂರು:** ವಿಧಾನ ಮಂಡಲದ ಚಳಿಗಾಲದ ಅಧಿವೇಶನ ನಡೆಸಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದೆ. ಕರೊನಾ ಕಾರಣದಿಂದ ಈ ಬಾರಿಯ ಲೋಕಸಭೆ ಅಧಿವೇಶನ ನಡೆಸಲು ಕೇಂದ್ರ ಸರ್ಕಾರ ಹಿಂದೇಟು ಹೊಡೆದಿದ್ದು, ಬಜೆಟ್ ಅಧಿವೇಶನವನ್ನು ಮುಂಚಿತವಾಗಿ ನಡೆಸಲು ಉದ್ದೇಶಿಸಿದೆ ಎನ್ನಲಾಗುತ್ತಿದೆ. ಆದರೆ, ರಾಜ್ಯದಲ್ಲಿ ಕರೊನಾ ಪ್ರಕರಣ ಕಡಿಮೆ ಇರುವುದರಿಂದ ಮತ್ತು ಪ್ರಮುಖ ವಿಧೇಯಕಗಳಿಗೆ ಒಪ್ಪಿಗೆ ಪಡೆಯಬೇಕಿರುವುದರಿಂದ ಡಿಸೆಂಬರ್‌ನಲ್ಲಿ ಅಧಿವೇಶನ ಕರೆಯಲು ಉದ್ದೇಶಿಸಿದೆ. ಬುಧವಾರ ನಡೆಯುವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆಯಲಿದ್ದು, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧಿವೇಶನ ನಡೆಸುವ ಕುರಿತು ಸಂಪುಟ ಸದಸ್ಯರಿಂದ ಅಭಿಪ್ರಾಯ ಕೇಳಲಿದ್ದಾರೆ. ಬಸವಕಲ್ಯಾಣ ಹಾಗೂ ಮಸ್ಕಿ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯೊಳಗೆ ಅಧಿವೇಶನ ನಡೆಸಬೇಕೆಂಬ ಉದ್ದೇಶವಿದ್ದು, ಈ ಕಾರಣಕ್ಕೆ ಡಿಸೆಂಬರ್ ಎರಡನೇ ವಾರದ ಆರಂಭದಿಂದ 10 ದಿನ ಕಲಾಪ ನಡೆಸುವ ಬಗ್ಗೆ ಚಿಂತನೆ ಇದೆ. ಸಂಪುಟ ಸಭೆಯಲ್ಲಿ ದಿನಾಂಕದ ಬಗ್ಗೆ ಚರ್ಚೆ ನಡೆಯಲಿದ್ದು, ಅಂತಿಮ ನಿರ್ಧಾರವನ್ನು ಸಿಎಂ ಕೈಗೊಳ್ಳಲಿದ್ದಾರೆ.